# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **70 (45)** |
| **ಸದಸ್ಯರ ಹೆಸರು** | **ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **17-08-2026** |
| **ಉತ್ತರಿಸಬೇಕಾದ ಸಚಿವರು** | **ಉನ್ನತ ಶಿಕ್ಷಣ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಸುಮಾರು 10,000 ಕ್ಕೂ ಹೆಚ್ಚು ಅತಿಥಿ ಉಪನ್ಯಾಸಕರಿಗೆ ಖಾಯಂ ಸೇವಾ ಭದ್ರತೆ ಅಥವಾ ಸೇವೆ ಸರಳಗೊಳಿಸಿ ಮುಂದುವರಿಸಲು ಸರ್ಕಾರದ ಮುಂದಿರುವ ಪ್ರಸ್ತುತ ಪ್ರಸ್ತಾವನೆಗಳು ಹಾಗೂ ತರಲಾಗಿರುವ ಮಾರ್ಗ ಸೂಚಿಗಳು ಯಾವುವು? | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರತಿ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಲಭ್ಯವಾಗುವ ಬೋಧನಾ ಕಾರ್ಯಭಾರವನ್ನು ನಿಯಮಾನುಸಾರ ಖಾಯಂ ಉಪನ್ಯಾಸಕರಿಗೆ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಮಾತ್ರ ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕ ವ್ಯವಸ್ಥೆಯಡಿ ನೇಮಕ ಮಾಡಿಕೊಳ್ಳಲಾಗುತ್ತಿದ್ದು, ಈ ರೀತಿಯ ತಾತ್ಕಾಲಿಕ ವ್ಯವಸ್ಥೆಯಡಿ ನೇಮಕ ಮಾಡಿಕೊಳ್ಳುವ ಅತಿಥಿ ಉಪನ್ಯಾಸಕರನ್ನು ಯಾವುದೇ ಮಂಜೂರಾದ ಖಾಲಿ ಹುದ್ದೆಗಳಿಗೆ ಎದುರಾಗಿ ಖಾಯಂಗೊಳಿಸಲು ಅವಕಾಶವಿರುವುದಿಲ್ಲ.<br><br>ಮುಂದುವರೆದು, ಕಳೆದ ಶೈಕ್ಷಣಿಕ ವರ್ಷಗಳಲ್ಲಿ ಕಾರ್ಯನಿರ್ವಹಿಸಿರುವ ಅತಿಥಿ ಉಪನ್ಯಾಸಕರಿಗೆ ಅವರ ಸೇವಾ ಅನುಭವವನ್ನು ಪರಿಗಣಿಸಿ ಹೆಚ್ಚಿನ ಕೃಪಾಂಕ (Weightage) ನೀಡುವ ಮೂಲಕ ಪ್ರತಿ ವರ್ಷ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.<br>ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸುವ ಸಂಬಂಧ ಯಾವುದೇ ಪ್ರಸ್ತಾವನೆಗಳು ಸರ್ಕಾರದ ಮುಂದೆ ಇರುವುದಿಲ್ಲ. |
| (ಆ) | ಪ್ರಸ್ತುತ ಅತಿಥಿ ಉಪನ್ಯಾಸಕರಿಗೆ ಅನುಭವದ ಆಧಾರದ ಮೇಲೆ ನೀಡಲಾಗುತ್ತಿರುವ ಗೌರವಧನ ಎಷ್ಟು ಯು.ಜಿ.ಸಿ (UGC) ನಿಯಮಾವಳಿಗಳ ಪ್ರಕಾರ ಸಮಾನ ಕೆಲಸಕ್ಕೆ ಸಮಾನ ವೇತನ ಅಥವಾ ಕನಿಷ್ಠ ರೂ.50,000 ಗಳ ಗೌರವ ಧನ ನೀಡಬೇಕೆಂಬ ಬೇಡಿಕೆಯನ್ನು ಈಡೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸರ್ಕಾರದ ಆದೇಶ ಸಂಖ್ಯೆ:ಇಡಿ 36 ಡಿಸಿಇ 2024 (ಇ), ದಿನಾಂಕ:04-03-2024 ರನ್ವಯ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ಪಾವತಿಸಲಾಗುತ್ತಿರುವ ಗೌರವಧನದ ವಿವರ ಈ ಕೆಳಕಂಡಂತಿದೆ. |

| ಕ್ರ. ಸಂ | ಸೇವಾವಧಿ ಮತ್ತು ವಿದ್ಯಾರ್ಹತೆ | ಗೌರವಧನದ ಮೊತ್ತ |
|---|---|---|
| 1 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 35,000/- |
| 2 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 31,000/- |
| 3 | 5 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 10 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 38,000/- |
| 4 | 5 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 10 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 34,000/- |

<table>
<tr>
<td></td>
<td></td>
<td>
<table>
<tr><td>5</td><td>10 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 15 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ</td><td>39,000/-</td></tr>
<tr><td>6</td><td>10 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 15 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ಹೊಂದಿಲ್ಲದವರಿಗೆ</td><td>35,000/-</td></tr>
<tr><td>7</td><td>15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ</td><td>40,000/-</td></tr>
<tr><td>8</td><td>15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ</td><td>36,000/-</td></tr>
</table>
<br>
ಯು.ಜಿ.ಸಿ. (UGC) ನಿಯಮಾವಳಿಗಳ ಪ್ರಕಾರ ಸಮಾನ ಕೆಲಸಕ್ಕೆ ಸಮಾನ ವೇತನ ಅಥವಾ ಕನಿಷ್ಠ ರೂ.50,000 ಗಳ ಗೌರವಧನ ನೀಡಬೇಕೆಂಬ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.
</td>
</tr>
<tr>
<td>(ಇ)</td>
<td>ಅತಿಥಿ ಉಪನ್ಯಾಸಕರಿಗೆ ಘೋಷಿಸಲಾಗಿದ್ದ ರೂ.5 ಲಕ್ಷದ ಆರೋಗ್ಯ ವಿಮೆ, 60 ವರ್ಷ ತುಂಬಿದ ನಂತರ ನೀಡಲಾಗುವ ರೂ.5 ಲಕ್ಷದ ಆರ್ಥಿಕ ನೆರವು, ಮತ್ತು ಮಹಿಳಾ ಉಪನ್ಯಾಸಕರಿಗೆ 3 ತಿಂಗಳ ವೇತನ ಸಹಿತ ಹೆರಿಗೆ ರಜೆ ಸೌಲಭ್ಯಗಳು ಪ್ರಸ್ತುತ ಸಂಪೂರ್ಣವಾಗಿ ಅನುಷ್ಠಾನಕ್ಕೆ ಬಂದಿವೆಯೇ; ಇಲ್ಲದಿದ್ದಲ್ಲಿ ವಿಳಂಬಕ್ಕೆ ಕಾರಣವೇನು?</td>
<td>ಸರ್ಕಾರದ ಆದೇಶ ಸಂಖ್ಯೆ:ಇಡಿ 36 ಡಿಸಿಇ 2024, ದಿನಾಂ:04.03.2024 ಮತ್ತು ತಿದ್ದುಪಡಿ ಆದೇಶ ದಿನಾಂಕ:16.03.2024 ರಲ್ಲಿ ನೀಡಲಾಗಿರುವ ಮಂಜೂರಾತಿಯಂತೆ ಸರ್ಕಾರದ ಆದೇಶ ಸಂಖ್ಯೆ:ಇಡಿ 208 ಡಿಸಿಇ 2024(ಇ), ದಿನಾಂಕ:30.05.2025 ರಲ್ಲಿ ದಿನಾಂಕ:01.01.2024 ರಿಂದ ಜಾರಿಗೆ ಬರುವಂತೆ, 60 ವರ್ಷ ವಯೋಮಿತಿ ಪೂರೈಸಿದ ಅಥವಾ ಮರಣ ಹೊಂದಿದ ಅತಿಥಿ ಉಪನ್ಯಾಸಕರಿಗೆ ಕೆಲವು ಮಾರ್ಗಸೂಚಿಗಳಿಗೆ ಒಳಪಟ್ಟು ಭದ್ರತಾ ರೂಪದಲ್ಲಿ ವಾರ್ಷಿಕ ರೂ.50,000 ಗಳಂತೆ ಗರಿಷ್ಠ 5.00 ಲಕ್ಷಗಳ ಮೊತ್ತದ ಇಡಿಗಂಟಿನ ಸೌಲಭ್ಯವನ್ನು ಅನುಷ್ಠಾನಗೊಳಿಸಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.<br><br>
ಸರ್ಕಾರದ ಆದೇಶ ಸಂಖ್ಯೆ: ಇಡಿ 166 ಡಿಸಿಇ 2026(ಇ), ದಿನಾಂಕ:25.06.2026 ರಲ್ಲಿ 2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 131 ರಂತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಅತಿಥಿ ಉಪನ್ಯಾಸಕರಿಗೆ 90 ದಿನಗಳ ವೇತನ ಸಹಿತ ಮಾತೃತ್ವ ರಜೆಯ ಸೌಲಭ್ಯವನ್ನು 2026-27ನೇ ಶೈಕ್ಷಣಿಕ ಸಾಲಿನಿಂದ ಜಾರಿಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.<br><br>
ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಆರೋಗ್ಯದ ದೃಷ್ಟಿಯಿಂದ ವಾರ್ಷಿಕ ರೂ.5.00 ಲಕ್ಷಗಳ ಆರೋಗ್ಯ ವಿಮಾ ಸೌಲಭ್ಯವನ್ನು ನೀಡುವ ನಿಟ್ಟಿನಲ್ಲಿ (ಅತಿಥಿ ಉಪನ್ಯಾಸಕರಿಂದ ಮಾಸಿಕ ವಂತಿಗೆ ರೂಪದಲ್ಲಿ ಪ್ರತಿ ತಿಂಗಳು ರೂ.400/- + ಸರ್ಕಾರದಿಂದ ರೂ.400/- ಒಟ್ಟು ರೂ.800/-) ಆರೋಗ್ಯ ವಿಮಾ ಸೌಲಭ್ಯವನ್ನು</td>
</tr>
</table>

| | | |
|---|---|---|
| | | ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಸಂಖ್ಯೆ:ಇಡಿ 36 ಡಿಸಿಇ 2024(ಇ), ದಿನಾಂಕ:04.03.2024 ರಲ್ಲಿ ಮಂಜೂರಾತಿ ನೀಡಲಾಗಿದೆ.<br><br>ಆದರೆ, 2025-26ನೇ ಸಾಲಿನ ಆಯವ್ಯಯ ಘೋಷಣೆ ಸಂಖ್ಯೆ: 140 ರಲ್ಲಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಒಪ್ಪಂದ, ಗುತ್ತಿಗೆ/ಹೊರಗುತ್ತಿಗೆ ಮತ್ತು ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಖಚಿತವಾದ ಆರೋಗ್ಯ ಸೌಲಭ್ಯಗಳನ್ನು ಒದಗಿಸುವ ಸಂಬಂಧ ಹೊಸ ಕೊಡುಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರಸ್ತಾಪಿಸಲಾಗಿದೆ. ಅದರನ್ವಯ ಸರ್ಕಾರದ ಆದೇಶ ಸಂಖ್ಯೆ: ಆಕುಕ 324 ಸಿಜಿಇ 2025, ದಿನಾಂಕ:24.06.2025 ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಒಪ್ಪಂದ, ಗುತ್ತಿಗೆ/ಹೊರಗುತ್ತಿಗೆ ಮತ್ತು ಗೌರವಧನದ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ 3 ಲಕ್ಷಕ್ಕೂ ಅಧಿಕ ಸಿಬ್ಬಂದಿ ಹಾಗೂ ಅವಲಂಬಿತರಿಗೆ ನಗದು ರಹಿತ ಆರೋಗ್ಯ ಭರವಸೆ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ನೌಕರರಿಂದ ಮಾಸಿಕ 100 ರೂ.ಗಳ ವಂತಿಕೆ ಮತ್ತು ಬಾಕಿ ಉಳಿದ ಹಣವನ್ನು ಸರ್ಕಾರದಿಂದ ಪಾವತಿಸಲು ಅನುಮೋದನೆ ನೀಡಿ ಆದೇಶಿಸಲಾಗಿದೆ.<br><br>ಈ ಹಿನ್ನೆಲೆಯಲ್ಲಿ, ಮೇಲಿನ ಎರಡೂ ಆದೇಶಗಳಲ್ಲಿನ ಸಾಧಕ-ಬಾಧಕಗಳನ್ನು ಪರಿಶೀಲಿಸಿ, ಉನ್ನತ ಶಿಕ್ಷಣ ಇಲಾಖೆಯ ಆರೋಗ್ಯ ವಿಮಾ ಯೋಜನೆಯು ಅತಿಥಿ ಉಪನ್ಯಾಸಕರಿಗೆ ಮಾತ್ರ ಅನ್ವಯವಾಗಲಿದ್ದು, ಅತಿಥಿ ಉಪನ್ಯಾಸಕರಿಗೆ ಮತ್ತು ಸರ್ಕಾರಕ್ಕೂ ಸಹ ಹೆಚ್ಚಿನ ಆರ್ಥಿಕ ಹೊರೆಯಾಗಲಿರುವುದರಿಂದ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ವಿಮಾ ಯೋಜನೆಯ ಸೌಲಭ್ಯಗಳು ಅತಿಥಿ ಉಪನ್ಯಾಸಕರಿಗೆ ಅನ್ವಯವಾಗುವುದರ ಜೊತೆಗೆ ಅವರ ಕುಟುಂಬ ಸದಸ್ಯರಿಗೂ ಸಹ ಅನ್ವಯವಾಗಲಿದ್ದು, ಸದರಿ ಯೋಜನೆಗೆ ಸರ್ಕಾರಕ್ಕೆ ತಗಲುವ ಹೆಚ್ಚಿನ ಹೊರೆಯು ಸಹ ಕಡಿಮೆಯಾಗಲಿರುವುದರಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ವಿಮಾ ಯೋಜನೆಯನ್ನು ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಗೌರವಧನದ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಅನುಷ್ಠಾನಗೊಳಿಸುವುದು ಹೆಚ್ಚು ಸೂಕ್ತ ಎಂದು ತೀರ್ಮಾನಿಸಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ವಿಮಾ ಯೋಜನೆಯನ್ನು ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಅನುಷ್ಠಾನಗೊಳಿಸುವ ಪೂರ್ವದಲ್ಲಿ ಇಲಾಖೆಯ ಅತಿಥಿ ಉಪನ್ಯಾಸಕರಿಗೆ ಉದ್ದೇಶಿತ ಯೋಜನೆಯಡಿ ಲಭ್ಯಗೊಳಿಸಬಹುದಾದ ಲಾಭಗಳನ್ನು ಅಂದರೆ Surgical |

| | | |
|---|---|---|
| | | Packages ಹಾಗೂ Medical Management ಗಳಿಗೆ ನೀಡಬಹುದಾದ ದರಗಳನ್ವಯ ಕಟಾವಣೆ ಮಾಡಬೇಕಾದ ವಂತಿಗೆಯನ್ನು ನಿರ್ಧರಿಸಬೇಕಾಗುತ್ತದೆ. ಆದ ಕಾರಣ, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ, ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಮತ್ತು ಅವರ ಅವಲಂಬಿತರಿಗೆ ನಗದು ರಹಿತ ಆರೋಗ್ಯ ಯೋಜನೆಯನ್ನು ತಂದಿರುವ ಆಧಾರದ ಮೇಲೆ ಈ ಬಗ್ಗೆ ರೂಪು ರೇಷೆಗಳನ್ನು ಸಿದ್ಧಪಡಿಸಿ, ನಂತರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ SAST ನೊಂದಿಗೆ ಸಮಾಲೋಚನೆಯು ಪ್ರಗತಿಯಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ ಸದರಿ ಯೋಜನೆಯಲ್ಲಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ. |
| (ಈ) | ಪ್ರತಿ ಶೈಕ್ಷಣಿಕ ವರ್ಷದ ಆರಂಭದಲ್ಲಿ ಆನ್‌ಲೈನ್ ಕೌನ್ಸೆಲಿಂಗ್ ಪ್ರಕ್ರಿಯೆಯಿಂದಾಗಿ ಹಿರಿಯ ಮತ್ತು ಅನುಭವಿ ಉಪನ್ಯಾಸಕರು ಉದ್ಯೋಗ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈಗಾಗಲೇ ವಯೋಮಿತಿ ಮೀರಿರುವ ಉಪನ್ಯಾಸಕರ ಹಿತ ರಕ್ಷಣೆಗಾಗಿ ನೇಮಕಾತಿಯಲ್ಲಿ ಹೆಚ್ಚುವರಿ ವೈಟೇಜ್ (Weightage) ನೀಡುವ ಕುರಿತು ಸರ್ಕಾರದ ನಿಲುವೇನು? | ಕಳೆದ ಶೈಕ್ಷಣಿಕ ವರ್ಷಗಳಲ್ಲಿ ಕಾರ್ಯನಿರ್ವಹಿಸಿರುವ ಅನುಭವಿ ಅತಿಥಿ ಉಪನ್ಯಾಸಕರಿಗೆ ಅವರ ಸೇವಾ ಅನುಭವವನ್ನು ಪರಿಗಣಿಸಿ ಪ್ರತಿ ವರ್ಷ ನಡೆಯುವ ಆನ್-ಲೈನ್ ಕೌನ್ಸಿಲಿಂಗ್‌ನಲ್ಲಿ ಒಂದು ವರ್ಷದ ಅನುಭವಕ್ಕೆ 03 ಅಂಕಗಳ ಆಧಾರದಲ್ಲಿ ಗರಿಷ್ಠ 48 ಅಂಕಗಳವರೆಗೆ ಕೃಪಾಂಕ (Weightage) ನೀಡುವ ಮೂಲಕ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. |

ಇಡಿ 256 ಡಿಸಿಇ 2026 (ಇ)

(ಬಸವರಾಜ ರಾಯರೆಡ್ಡಿ)
ಉನ್ನತ ಶಿಕ್ಷಣ ಸಚಿವರು